# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 715(818)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ರಾಜ್ಯದಲ್ಲಿನ ಮರಳು ಅಭಾವ ಕುರಿತು

(ಅ) ರಾಜ್ಯದಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗೆ ರೂಪಿಸಿರುವ ನೀತಿ ನಿಯಮಗಳೇನು; (ವಿವರ ಒದಗಿಸುವುದು)

(ಆ) ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ಹಾಗೂ ಸರ್ಕಾರದಿಂದ ಮರಳು ಪೂರೈಸಲು ಗುರುತಿಸಿರುವ ಸ್ಥಳಗಳು ಯಾವುವು ಹಾಗೂ ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು;

(ಇ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರದಲ್ಲಿ ಎಷ್ಟು ಟನ್ ಮರಳು ಪೂರೈಕೆಗೆ ಬೇಡಿಕೆ ಇತ್ತು; ಎಷ್ಟು ಟನ್ ಮಾರಾಟ ಮಾಡಲಾಗಿದೆ; ಬೇಡಿಕೆಯಂತೆ ಪೂರ್ಣವಾಗಿ ಮರಳು ಪೂರೈಸಲಾಗಿದೆಯೇ? (ವಿವರ ನೀಡುವುದು)